**Akashvani : Bangalore**
**Regional Bulletin In Kannada**
**29.06.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**29.06.2026 / 18.40 hrs**

---

ಮುಖ್ಯಾಂಶಗಳು

೧. ರಾಜ್ಯದಲ್ಲಿ ನಾಳೆಯಿಂದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ; ಬಿಎಲ್‌ಒ ಗಳಿಗೆ ಸಹಕರಿಸುವಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿ ಮನವಿ

೨. ವಿದ್ಯುತ್ ಸರಬರಾಜು ಖಾಸಗೀಕರಣ ಮಾಡುವ ಪ್ರಶ್ನೆಯೇ ಇಲ್ಲ- ಇಂಧನ ಸಚಿವ ಕೆ.ಜೆ.ಜಾರ್ಜ್ ಸ್ಪಷ್ಟನೆ

೩. ಅರಣ್ಯ ವಾಸಿಗಳ  ಹಕ್ಕುಗಳನ್ನು ಕಡೆಗಣಿಸದಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧಿಕಾರಿಗಳಿಗೆ ಸೂಚನೆ

೪. ರಾಜ್ಯದ ನಗರ ಯೋಜನೆಗಳ ಕುರಿತು ಪೌರಾಡಳಿತ ಇಲಾಖೆಯ ಅಧಿಕಾರಿಗಳೊಂದಿಗೆ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಸಭೆ

೫. ಮಡಿಕೇರಿ ಸೇರಿದಂತೆ ಕೊಡಗಿನಲ್ಲಿ ಮುಂಗಾರು ಮಳೆ ಚುರುಕು; ರೈತರ ಮೊಗದಲ್ಲಿ ಮಂದಹಾಸ

---

ರಾಜ್ಯದಲ್ಲಿ ನಾಳೆಯಿಂದ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಆರಂಭವಾಗಲಿದೆ.  ಈ ಸಂಬಂಧ ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಪ್ರತಿಕ್ರಿಯಿಸಿದ್ದು, ರಾಜ್ಯದಲ್ಲಿ ಪ್ರಸ್ತುತ ಒಟ್ಟು ೫ ಕೋಟಿ ೫೪ ಲಕ್ಷದ ೩೨ ಸಾವಿರದ ೩೧೪ ಮತದಾರಿದ್ದು, ಎಲ್ಲರು ವಿಶೇಷ ಸಮಗ್ರ ಪರಿಷ್ಕರಣೆಗೆ ಒಳಪಡಲಿದ್ದಾರೆ. ಈಗಾಗಲೇ ಶೇಕಡಾ ೯೧.೬೧ ರಷ್ಟು ಮತದಾರರು ಮ್ಯಾಪಿಂಗ್‌ಗೆ ಒಳಪಟ್ಟಿದ್ದಾರೆ. ೪೬ ಲಕ್ಷದ ೫೨ ಸಾವಿರದ ೫೦೪ ಮ್ಯಾಪಿಂಗ್‌ನಿಂದ ಹೊರ ಉಳಿದಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಎಸ್‌ಐಆರ್‌ಗಾಗಿ ರಾಜ್ಯದಾದ್ಯಂತ ೫೯ ಸಾವಿರದ ೫೦ ಬೂತ್ ಮಟ್ಟದ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ೩೧ ಜಿಲ್ಲಾ ಚುನಾವಣಾಧಿಕಾರಿಗಳು, ೪ ಅಪರ ಜಿಲ್ಲಾ

ಚುನಾವಣಾಧಿಕಾರಿಗಳು, ೨೨೪ ನೋಂದಣಾಧಿಕಾರಿಗಳು, ೩೩೬ ಸಹಾಯಕ ನೋಂದಣಾಧಿಕಾರಿಗಳು ಹಾಗೂ ಬಿಎಲ್‌ಒ ಗಳನ್ನು ನೇಮಕ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಬಿಎಲ್‌ಒಗಳು ಮನೆ ಮನೆಗೆ ಭೇಟಿ ನೀಡಿ ಗಣತಿ ನಮೂನೆ ವಿತರಣೆ ಮಾಡಲಿದ್ದು, ಭರ್ತಿ ಮಾಡಿದ ನಮೂನೆಗಳನ್ನು ಡಿಜಿಟಲೀಕರಣಕ್ಕೆ ಕಳುಹಿಸಲಿದ್ದಾರೆ. ಎನ್ಯೂಮರೇಷನ್ ಫಾರ್ಮ್ ಭರ್ತಿ ಮಾಡಿ, ಬಿಎಲ್‌ಒಗಳಿಗೆ ಹಿಂದಿರುಗಿಸುವಂತೆ ಮನವಿ ಮಾಡಿದ್ದಾರೆ.

ಧ್ವನಿ: ಅನ್ಬುಕುಮಾರ್, ರಾಜ್ಯ ಮುಖ್ಯ ಚುನಾವಣಾಧಿಕಾರಿ

---

ನಾಳೆಯಿಂದ ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ-ಎಸ್‌ಐಆರ್ ನಡೆಯಲಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಶೇಕಡಾ ೭೬.೩೨ ರಷ್ಟು ಮ್ಯಾಪಿಂಗ್ ಪೂರ್ಣಗೊಂಡಿದೆ ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಯೊಬ್ಬ ಮತದಾರರು, ಗಣತಿ ನಮೂನೆಯನ್ನು ಅಗತ್ಯ ಮಾಹಿತಿ ಮತ್ತು ಸ್ವಯಂ ದೃಢೀಕರಿಸಿದ ದಾಖಲೆಗಳೊಂದಿಗೆ ಬಿಎಲ್‌ಒಗಳಿಗೆ ಕಡ್ಡಾಯವಾಗಿ ಸಲ್ಲಿಸುವಂತೆ ತಿಳಿಸಿದ್ದಾರೆ.

---

ವಿದ್ಯುತ್ ಪೂರೈಕೆಯ ಹೊಣೆಯನ್ನು ಟಾಟಾ ಕಂಪನಿಗೆ ವಹಿಸುವ ಪ್ರಸ್ತಾವವನ್ನು ಮುಂಬರು ಸಚಿವ ಸಂಪುಟದಲ್ಲಿ ಚರ್ಚಿಸಿ, ತೀರ್ಮಾನಿಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭರವಸೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನೌಕರರ ಸಂಘ ಏರ್ಪಡಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ನೌಕರರ ಬೇಡಿಕೆಗಳಿಗೆ ಸಂಬಂಧಿಸಿದಂತೆ ಸರ್ಕಾರ ನ್ಯಾಯಯುತ ತೀರ್ಮಾನ ಮಾಡಲಿದೆ ಎಂದು ಹೇಳಿದ್ದಾರೆ.

ಇದೇ ವೇಳೆ, ವಿದ್ಯುತ್ ಸರಬರಾಜು ಖಾಸಗೀಕರಣ ಮಾಡುವ ಪ್ರಶ್ನೆಯೇ ಇಲ್ಲ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ. ಇಂಧನ ಇಲಾಖೆ ಬಲಿಷ್ಠವಾಗಿದ್ದು, ಸರ್ಕಾರ ನೌಕರರ ಪರವಾಗಿದೆ ಎಂದು ಹೇಳಿದ್ದಾರೆ.

ಇಂಧನ ಇಲಾಖೆ ದೂರದೃಷ್ಟಿಯ ಯೋಜನೆಗಳನ್ನು ಸಿದ್ಧಪಡಿಸಿದ್ದು, ಮುಂದಿನ ೨೫ ವರ್ಷಗಳ ಅವಧಿಗೆ ವಿದ್ಯುತ್ ಭದ್ರತೆ ಒದಗಿಸಲು ಯೋಜನೆ ಸಿದ್ಧವಾಗಿದೆ ಎಂದು ತಿಳಿಸಿದ್ದಾರೆ. ಮುಂದಿನ ದಿನಗಳಲ್ಲಿ ಇಂಧನ ಇಲಾಖೆಯಿಂದ ಇನ್ನೂ ಹೆಚ್ಚಿನ ಯೋಜನೆಗಳು ಜಾರಿಯಾಗಲಿವೆ ಎಂದು ಸ್ಪಷ್ಟಪಡಿಸಿದ್ದಾರೆ.

ಸಮಾರಂಭದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳ ಸಾವಿರಾರು ನೌಕರರು ಭಾಗವಹಿಸಿದ್ದರು.

---

ಅರಣ್ಯ ವಾಸಿಗಳ ಅರಣ್ಯ ಹಕ್ಕುಗಳನ್ನು ಯಾವುದೇ ಕಾರಣಕ್ಕೂ ಕಡೆಗಣಿಸಬಾರದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೂಚಿಸಿದ್ದಾರೆ.

ವಿಧಾನಸೌಧದಲ್ಲಿಂದು ಅರಣ್ಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಕುಡಿಯುವ ನೀರು, ರಸ್ತೆ, ವಿದ್ಯುತ್ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಆದ್ಯತೆ ನೀಡುವಂತೆ ನಿರ್ದೇಶನ ನೀಡಿದ್ದಾರೆ.

ಬಾಕಿ ಇರುವ ಅರಣ್ಯ ಅನುಮತಿ ಪ್ರಕರಣಗಳನ್ನು ಜುಲೈ ೧೫ರೊಗಳಗೆ ಇತ್ಯರ್ಥಪಡಿಸುವಂತೆ ತಿಳಿಸಿದ್ದಾರೆ. ಅರಣ್ಯ ಹಾಗೂ ಪ್ರಾಣಿ ಸಂಪತ್ತನ್ನು ಸಂರಕ್ಷಿಸುವ ಕೆಲಸ ಪರಿಣಾಮಕಾರಿಯಾಗಿ ಆಗಬೇಕು. ಈ ಹಿನ್ನೆಲೆಯಲ್ಲಿ ಪ್ರಾಣಿ ಸಂಪತ್ತಿನ ಮೇಲೆ ನಿಗಾ ಇಡಲು ಥರ್ಮಲ್ ಡ್ರೋಣ್ ವ್ಯವಸ್ಥೆ ಜಾರಿಗೆ ತರುವುದಾಗಿ ತಿಳಿಸಿದ್ದಾರೆ.

---

ರಾಜ್ಯದ ನಗರ ಯೋಜನೆಗಳ ಕುರಿತು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಬೆಂಗಳೂರಿನಲ್ಲಿಂದು ಪೌರಾಡಳಿತ ನಿರ್ದೇಶನಾಲಯದ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದಾರೆ.

ನಗರಗಳ ಸುಸ್ಥಿರ ಅಭಿವೃದ್ಧಿ, ವೈಜ್ಞಾನಿಕ ನಗರ ಯೋಜನೆ, ನಾಗರಿಕ ಸ್ನೇಹಿ ಮೂಲಸೌಕರ್ಯ ಹಾಗೂ ಭವಿಷ್ಯದ ಅಗತ್ಯಗಳಿಗೆ ಅನುಗುಣವಾಗಿ ನಗರಗಳನ್ನು ರೂಪಿಸುವ ನಿಟ್ಟಿನಲ್ಲಿ ಸಮಗ್ರ ಯೋಜನೆ ಅವಶ್ಯಕ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಕುರಿತು ಸಭೆಯಲ್ಲಿ ಚರ್ಚಿಸಿದ್ದಾರೆ.

ನಗರಾಭಿವೃದ್ಧಿ ಇಲಾಖೆಯ ಜಂಟಿ ಕಾರ್ಯದರ್ಶಿ ಕೃಷ್ಣಮೂರ್ತಿ, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅಪರ ನಿರ್ದೇಶಕ ಶಶಿಕುಮಾರ್, ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

---

ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯಲ್ಲಿ ಇಂದಿನಿಂದ ಮುಂಗಾರು ಮಳೆ ಚುರುಕಾಗಿದೆ.

ಇಂದು ಮಧ್ಯಾಹ್ನದಿಂದಲೇ ಕಾವೇರಿ ನದಿ ಪಾತ್ರ ಸೇರಿದಂತೆ ಜಿಲ್ಲೆಯ ಬಹುತೇಕ ಕಡೆ ಉತ್ತಮ ಮಳೆಯಾಗುತ್ತಿದೆ. ಸಾಮಾನ್ಯವಾಗಿ ಕೊಡಗಿನಲ್ಲಿ ಜೂನ್ ಮೊದಲ ವಾರದಲ್ಲಿ ಆರಭವಾಗಬೇಕಾಗಿದ್ದ ಮುಂಗಾರು ಈ ವರ್ಷ ತಡವಾದ ಹಿನ್ನಲೆಯಲ್ಲಿ ರೈತಾಪಿಗಳಿಗೆ ಆತಂಕ ಉಂಟಾಗಿತ್ತು. ಇದೀಗ ಸುಮಾರು ೧ ತಿಂಗಳು ತಡವಾಗಿ ಮುಂಗಾರು ಬಿರುಸಾಗಿರುವುದು ರೈತರಲ್ಲಿ ನೆಮ್ಮದಿ ಮೂಡಿಸಿದೆ.

---

ಬೆಳಗಾವಿಯ ಗುರುದೇವ ರಾನಡೆ ಮಂದಿರದ ತುಲನಾತ್ಮಕ ತತ್ವಶಾಸ್ತ್ರ ಮತ್ತು ಧಾರ್ಮಿಕ ಅಕಾಡೆಮಿಯ ಶತಮಾನೋತ್ಸವ ಉದ್ಘಾಟನೆ ಹಾಗೂ ಗುರುದೇವ ರಾನಡೆ ಅವರ ಸಂಪೂರ್ಣ ಬರಹ ಒಳಗೊಂಡ ೨೮ ಸಂಪುಟಗಳನ್ನು ಕೇಂದ್ರದ ಸಾಂಸ್ಕೃತಿಕ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಇಂದು ಲೋಕಾರ್ಪಣೆಗೊಳಿಸಿದರು.

ಈ ವೇಳೆ ಮಾತನಾಡಿದ ಅವರು, ಭಾರತ ತನ್ನ ದಾರ್ಶನಿಕ ಪರಂಪರೆಯ ಭವ್ಯ ಸಂಸ್ಕೃತಿಯ ಮೂಲಕ ಇಡೀ ಜಗತ್ತಿಗೆ ಮಾಗದರ್ಶನ ನೀಡುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

---

ಕೇಂದ್ರ ಸರ್ಕಾರದ ಮನ್ರೇಗಾ ಯೋಜನೆಗೆ ಪರ್ಯಾಯವಾಗಿ ಜಾರಿಗೆ ತಂದಿರುವ ವಿಬಿಜಿ ರಾಮ್ ಜಿ ಯೋಜನೆಗೆ ಅಧಿಕೃತವಾಗಿ ಬಳಸಲಾಗುವ ಲೋಗೋ ನೀಡಿದ ಕೀರ್ತಿ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನ ರಾಮ್ ಪ್ರಸಾದ್ ಕೆ ಅವರಿಗೆ ಸಂದಿದೆ.

ವಿಬಿಜಿ ರಾಮ್ ಜಿ ಯೋಜನೆಗೆ ಲೋಗೋ ವಿನ್ಯಾಸ ಮಾಡುವಂತೆ ದೇಶದ ಕಲಾವಿದರಿಗೆ ಅವಕಾಶ ನೀಡಲಾಗಿತ್ತು. ಸುಮಾರು ೭ ಸಾವಿರಕ್ಕೂ ಅಧಿಕ ಕಲಾವಿದರು ತಾವು ರಚಿಸಿದ ಲೋಗೋ ಕಳಿಸಿಕೊಟ್ಟಿದ್ದರು. ಆದರೆ ಕನ್ನಡಿಗ ರಾಮ್ ಪ್ರಸಾದ್ ಕೆ ಕಳುಹಿಸಿದ ಲೋಗೋ ಆಯ್ಕೆಯಾಗುವ ಮೂಲಕ ಕರಾವಳಿಯ ಹಿರಿಮೆ ಹೆಚ್ಚಿಸಿದೆ.

ಲೋಗೋ ಆಯ್ಕೆಯಾಗಿರುವ ಕುರಿತು ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿರುವ ರಾಮ್ ಪ್ರಸಾದ್ ಇದೊಂದು ಅದ್ಭುತ ಅವಕಾಶ ಎಂದು ತಿಳಿಸಿದ್ದಾರೆ.

ಧ್ವನಿ: ರಾಮ್ ಪ್ರಸಾದ್

___________ ಮುಕ್ತಾಯ __________